2007ರ ಕರ್ನಾಟಕ ಅಧಿನಿಯಮ ಸಂಖ್ಯೆ 13

# ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2007

## ಪ್ರಕರಣಗಳ ಪಟ್ಟಿ

**ಪ್ರಕರಣಗಳು:**


1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. 2ನೇ ಪ್ರಕರಣದ ತಿದ್ದುಪಡಿ
3. ಹೊಸ ಅಧ್ಯಾಯ IIಎ ಸೇರ್ಪಡೆ
4. ನಿರಸನ ಮತ್ತು ಉಳಿಸುವಿಕೆಗಳು


## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**2007ರ ತಿದ್ದುಪಡಿ ಅಧಿನಿಯಮ ಸಂಖ್ಯೆ 13:** ಸಾರ್ವಜನಿಕ ಸಂಗ್ರಹಣೆಗಳಲ್ಲಿ ಅತ್ಯುತ್ತಮ ಪದ್ಧತಿಗಳನ್ನು ಜಾರಿಗೆ ತರಲು ಇ-ಸಂಗ್ರಹಣೆ ಹಾಗೂ ಇ-ಸಂಗ್ರಹಣಾ ವೇದಿಕೆಯ ವ್ಯವಸ್ಥೆ ಪ್ರಾರಂಭಿಸುವುದು ಅವಶ್ಯವೆಂದು ಪರಿಗಣಿಸಲಾಗಿದೆ. ಬೇಡಿಕೆಗಳನ್ನು ಒಟ್ಟುಗೂಡಿಸಲು, ಬೆಲೆ ಪಟ್ಟಿಯ ಖರ್ಚನ್ನು ಕಡಿಮೆ ಮಾಡಲು, ಸ್ಥಿರವಾದ ಸಂಗ್ರಹಣಾ ವಿಧಾನವನ್ನು ರೂಢಿಗೆ ತರಲು ಮತ್ತು ಪಾರದರ್ಶಕತೆಯನ್ನು ಉಂಟು ಮಾಡಲು ಇ-ಸಂಗ್ರಹಣೆ ವಿಧಾನವು ಉಪಯುಕ್ತವಾಗುವುದು.

ಆದ್ದರಿಂದ ಈ ವಿಧೇಯಕ.
[2007ರ ವಿಧಾನಸಭೆಯ ವಿಧೇಯಕ ಸಂಖ್ಯೆ:12]

[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 35ನೇ ನಮೂದನೆ ಹಾಗೂ 3ನೇ ಪಟ್ಟಿಯ 7 ಮತ್ತು 12ನೇ ನಮೂದನೆಗಳ ಅಡಿಯಲ್ಲಿ ಬರುತ್ತದೆ.]

– – – –

**2007ರ ಕರ್ನಾಟಕ ಅಧಿನಿಯಮ ಸಂಖ್ಯೆ 13**

(2007ರ ಮೇ ಎರಡನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟವಾಗಿದೆ)

# ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2007

(2007ರ ಏಪ್ರಿಲ್ ಇಪ್ಪತ್ತೇಳನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು (2000ರ ಕರ್ನಾಟಕ ಅಧಿನಿಯಮ 29) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೆಂಟನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:–

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.–** (1) ಈ ಅಧಿನಿಯಮವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2007 ಎಂದು ಕರೆಯತಕ್ಕದ್ದು.

(2) ಇದು 2006ರ ನವೆಂಬರ್, 27ನೇ ದಿನಾಂಕದಿಂದ ಜಾರಿಗೆ ಬಂದಿದೆ ಎಂದು ಭಾವಿಸತಕ್ಕದ್ದು.

**2. 2ನೇ ಪ್ರಕರಣದ ತಿದ್ದುಪಡಿ.–** ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ರ (2000ರ ಕರ್ನಾಟಕ ಅಧಿನಿಯಮ 29) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 2ನೇ ಪ್ರಕರಣದಲ್ಲಿ,–

(i) (ಎ) ಖಂಡದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:–

"(ಎಎ) "ಇ–ಸಂಗ್ರಹಣೆ" ಎಂದರೆ, ಇ–ಸಂಗ್ರಹಣಾ ವೇದಿಕೆಯ ಮೂಲಕ ಸಂಗ್ರಹಣಾ ಸಂಸ್ಥೆಗಳು ಮಾಡುವ ಸರಕುಗಳನ್ನು ಕೊಂಡುಕೊಳ್ಳುವುದು, ಸೇವೆಗಳನ್ನು ಪಡೆದುಕೊಳ್ಳುವುದು ಅಥವಾ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳುವುದು;

(ಎಎಎ) "ಇ–ಸಂಗ್ರಹಣಾ ವೇದಿಕೆ" ಎಂದರೆ, ಅನುಕೂಲ ಜೋಡಣೆ (ಕಸ್ಟಮೈಜೇಷನ್) ಮೂಲಕ ಅಳವಡಿಸಿಕೊಂಡ ಅಂತರ್ಜಾಲ ವ್ಯವಸ್ಥೆ ಆಧಾರಿತ ಸಮಗ್ರ ಸಂಗ್ರಹಣಾ ಸಾಧನಗಳ ಮೂಲಕ ರಾಜ್ಯಸರ್ಕಾರವು ಸ್ಥಾಪಿಸಿದ ಮತ್ತು ನಿರ್ವಹಿಸುತ್ತಿರುವ ಸಂಗ್ರಹಣಾ ಪ್ರಕ್ರಿಯೆಯನ್ನು ಒಳಗೊಂಡ ವಿದ್ಯುನ್ಮಾನ ಮಾಧ್ಯಮದ ಒಂದು ಸಂಗ್ರಹಣಾ ವೇದಿಕೆ."

(ii) (ಎಲ್) ಖಂಡದ ತರುವಾಯ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:–

"ಪರಂತು, ಇ-ಸಂಗ್ರಹಣೆಯ ಉದ್ದೇಶಕ್ಕಾಗಿ "ಟೆಂಡರ್ ಕಾಗದ ಪತ್ರಗಳು" ಎಂದರೆ, ವಿದ್ಯುನ್ಮಾನ ನಮೂನೆ ರೂಪದಲ್ಲಿರುವ ದಸ್ತಾವೇಜುಗಳ ಸೆಟ್."

**3. ಹೊಸ ಅಧ್ಯಾಯ ಖಖಎ ಸೇರ್ಪಡೆ.–** ಮೂಲ ಅಧಿನಿಯಮದ ಅಧ್ಯಾಯ-II ರ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

**"ಅಧ್ಯಾಯ–IIಎ**

**ಇ – ಸಂಗ್ರಹಣೆ**

**18ಎ. ಇ–ಸಂಗ್ರಹಣೆ.–** (1) (2)ನೇ ಉಪ ಪ್ರಕರಣದ ಅಡಿಯಲ್ಲಿ ಅಧಿಸೂಚಿಸಬಹುದಾದ ಎಲ್ಲ ಸಂಗ್ರಹಣಾ ಸಂಸ್ಥೆಗಳಿಗೆ ಒಂದೇ ಸಂಕಲಿತ ಇ-ಸಂಗ್ರಹಣಾ ವೇದಿಕೆಯು ಇರತಕ್ಕದ್ದು.

(2) ಸಂಗ್ರಹಣೆಯ ವರ್ಗವು ಯಾವುದಾದರೂ ಇದ್ದರೆ, ಅದರ ಸಂಬಂಧದಲ್ಲಿ, ಒಂದು ಸಂಗ್ರಹಣಾ ಸಂಸ್ಥೆಯೆಂದು ಅಧಿಸೂಚಿಸಬಹುದಾದ ಒಂದು ಸಂಸ್ಥೆಯು ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ದಿನಾಂಕದಿಂದ ಜಾರಿಗೆ ಬರುವಂತೆ ತನ್ನ ಸಂಗ್ರಹಣೆಗಳನ್ನು ಇ-ಸಂಗ್ರಹಣಾ ವೇದಿಕೆಯ ಮೂಲಕ ಸಂಗ್ರಹಿಸತಕ್ಕದ್ದು.

(3) ಈ ಅಧಿನಿಯಮದಲ್ಲಿ ಏನೇ ಇದ್ದರೂ, ಇ-ಸಂಗ್ರಹಣಾ ವೇದಿಕೆಯ ಮೂಲಕ ಇ-ಸಂಗ್ರಹಣೆಗಳಿಗಾಗಿ (2)ನೇ ಉಪ ಪ್ರಕರಣದ ಅಡಿಯಲ್ಲಿ ಅಧಿಸೂಚಿಸಿದ ಸಂಗ್ರಹಣಾ ಸಂಸ್ಥೆಗಳು ಅನುಸರಿಸಬೇಕಾದ ಪ್ರತ್ಯೇಕ ಕಾರ್ಯವಿಧಾನವನ್ನು ನಿರ್ದಿಷ್ಟಪಡಿಸುವುದಕ್ಕಾಗಿ ಹಾಗೂ ಇ-ಸಂಗ್ರಹಣೆಗಳಿಗೆ ಇತರ ಸಂಗ್ರಹಣಾ ವಿಧಾನಗಳು ಅನ್ವಯವಾಗದಂತೆ ಮಾಡಲು ಸರ್ಕಾರವು ನಿಯಮಗಳನ್ನು ರಚಿಸಬಹುದು."

**4. ನಿರಸನ ಮತ್ತು ಉಳಿಸುವಿಕೆಗಳು.–** (1) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧ್ಯಾದೇಶ, 2006ನ್ನು (2006ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 2) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಹಾಗೆ ನಿರಸಿತಗೊಳಿಸಿದ್ದಾಗ್ಯೂ, ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿ ಮಾಡಲಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ಕಾರ್ಯ ಅಥವಾ ಕೈಗೊಳ್ಳಲಾದ ಯಾವುದೇ ಕ್ರಮವನ್ನು ಈ ಅಧಿನಿಯಮದ ಮೂಲಕ ತಿದ್ದುಪಡಿ ಮಾಡಲಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಜಿ.ಕೆ. ಬೋರೇಗೌಡ**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ.

ನಿರ್ದೇಶಕರು, ಮುದ್ರಣ, ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ, ಬೆಂಗಳೂರು.